ದಿನಾಂಕಃ **21-01-2023** ರಂದು ಸಾಕ್ಷಿಗೆ ಪ್ರಮಾಣ ವಚನವನ್ನು ಬೋಧಿಸಲಾಯಿತು.

ಮುಖ್ಯ ವಿಚಾರಣೆ ವಾದಿ ಪರ ಶ್ರೀ ಬಿ ಡಿ ಜೆ ವಕೀಲರಿಂದಃ

14. ನಾನು ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರದಲ್ಲಿ ಸಲ್ಲಿಸಿರುವ ಅಂಶಗಳನ್ನು ನಾನು ನನ್ನ ವಕೀಲರಿಗೆ ಹೇಳಿ ಬರೆಸಿರುತ್ತೇನೆ. ಅದರಲ್ಲಿ ಹೇಳಿರುವ ಅಂಶಗಳೆಲ್ಲಾ ಸತ್ಯವಾಗಿರುತ್ತದೆ ಹಾಗೂ ಅದರಲ್ಲಿರುವ ಸಹಿ ನನ್ನದೇ ಆಗಿರುತ್ತದೆ.

ದಾವೆಗೆ ಸಂಬಂಧಿಸಿದಂತೆ ಈ ಕೆಳಗಿನ ದಾಖಲಾತಿಗಳನ್ನು ಹಾಜರು ಮಾಡುತ್ತಿದ್ದು ಸದರಿ ದಾಖಲೆಗಳನ್ನು ನಿಶಾನೆಗಳಾಗಿ ಗುರುತಿಸಿಕೊಳ್ಳಲು ಕೋರುತ್ತೇನೆ.

1. ದಾವಾ ಸ್ವತ್ತಿಗೆ ಸಂಬಂಧಪಟ್ಟಿರುವ ಆರ್ ಟಿ ಸಿ ಯನ್ನು ನಿಪಿ-1 ಎಂದು ಗುರುತಿಸಲಾಯಿತು.
2. ಪ್ರತಿವಾದಿಗೆ ಕಳುಹಿರುವ ತಿಳುವಳಿಕೆ ಪತ್ರವನ್ನು ನಿಪಿ-2 ಎಂದು ಗುರುತಿಸಲಾಯಿತು.
3. ಪ್ರತಿವಾದಿಯವರು ಕಳುಹಿಸಿರುವ ಪತ್ಯುತ್ತರ ಪತ್ರವನ್ನು ನಿಪಿ-3 ಎಂದು ಗುರುತಿಸಲಾಯಿತು.

ಈ ಹಂತದಲ್ಲಿ ಮುಂದುವರೆದ ಮುಖ್ಯ ವಿಚಾರಣೆಗೆ ಶ್ರೀ ಬಿ ಡಿ ಜೆ ವಕೀಲರು ಕಾಲಾವಕಾಶವನ್ನು ಕೋರಿದ್ದು ಕೋರಿಕೆ ಮೇರೆಗೆ ಮುಂದೂಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕೀಕರಿಸಿ ಓದಿ ಹೇಳಿ, ಕೇಳಿದಾಗ ಸರಿ ಇದೆ ಎಂದು ಒಪ್ಪಿರುತ್ತಾರೆ.)

ಪ್ರಧಾನ ಸಿವಿಲ್ ನ್ಯಾಯಾಧೀಶರು
ತಿಪಟೂರು.